# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | | 392(472) |
| ವಿಧಾನ ಪರಿಷತ್ತಿನ ಸದಸ್ಯರ ಹೆಸರು | | ಶ್ರೀ ಕೇಶವ ಪ್ರಸಾದ್ ಎಸ್ (ವಿಧಾನ ಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ಸಚಿವರು | | ಮಾನ್ಯ ಮುಖ್ಯಮಂತ್ರಿಗಳು |
| ಉತ್ತರಿಸುವ ದಿನಾಂಕ | | 12.12.2024 |
| **ಕ್ರ ಸಂ** | **ಕೋರಿದ ಮಾಹಿತಿ** | **ರಾಜ್ಯ ಮಟ್ಟದ ಬ್ಯಾಂಕರುಗಳ ಸಮಿತಿಯು ಸಲ್ಲಿಸಿದ ಮಾಹಿತಿ** |
| ಅ | ಸರ್ಕಾರದ ವಿವಿಧ ಯೋಜನೆಯಡಿ ಸಹಾಯಧನಕ್ಕಾಗಿ ಫಲಾನುಭವಿಗಳನ್ನು ಆಯ್ಕೆ ಮಾಡಿ ರಾಷ್ಟ್ರೀಕೃತ ಬ್ಯಾಂಕುಗಳಿಗೆ ಸಾಲ ಮಂಜೂರಾತಿಗಾಗಿ ಪಟ್ಟಿಯನ್ನು ಸಲ್ಲಿಸಿದರೂ ಸಾಲ ಮಂಜೂರು ಮಾಡದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ಹಾಗಿದ್ದಲ್ಲಿ ಈವರೆಗೆ ಯಾವ ಯಾವ ಯೋಜನೆಗಳಲ್ಲಿ ಎಷ್ಟು ಜನ ಫಲಾನುಭವಿಗಳಿಗೆ ಸಾಲ ಮಂಜೂರು ಆಗಿರುವುದಿಲ್ಲ (ಯೋಜನೆಗಳೊಂದಿಗೆ ಜಿಲ್ಲಾವಾರು ಮಾಹಿತಿ ನೀಡುವುದು) | ರಾಜ್ಯಮಟ್ಟದ ಬ್ಯಾಂಕರುಗಳ ಸಮಿತಿಯು ಪ್ರತಿ ತ್ರೈಮಾಸಿಕ ಸಭೆಗಳಲ್ಲಿ ಜಿಲ್ಲಾವಾರು ಮತ್ತು ಬ್ಯಾಂಕ್ ವಾರು ಸರ್ಕಾರದ ವಿವಿಧ ಸಾಲ ಯೋಜನೆಗಳ ಪ್ರಗತಿಯನ್ನು ರಾಜ್ಯಮಟ್ಟದ ಮುಖ್ಯ ಕಾರ್ಯದರ್ಶಿಗಳ ನೇತೃತ್ವದಲ್ಲಿ ಎಲ್ಲಾ ಹಿರಿಯ ಬ್ಯಾಂಕ್ ಅಧಿಕಾರಿಗಳು ಸರ್ಕಾರದ ವಿವಿಧ ಇಲಾಖೆಗಳ ಹಿರಿಯ ಅಧಿಕಾರಿಗಳ ಸಮ್ಮುಖದಲ್ಲಿ ಪ್ರಗತಿಯನ್ನು ಪರಿಶೀಲಿಸಲಾಗುತ್ತದೆ. ಬಾಕಿ ಉಳಿದಿರುವ ಅರ್ಜಿಗಳ ಬಗ್ಗೆ ಬ್ಯಾಂಕುಗಳಿಗೆ ಸೂಕ್ತ ಮಾರ್ಗದರ್ಶನ ಮತ್ತು ನಿರ್ದೇಶನಗಳನ್ನು ಸಮಿತಿಯು ನೀಡುತ್ತಿದೆ. ಜಿಲ್ಲಾ ಮಟ್ಟದಲ್ಲಿ ಆಯಾ ಮಾರ್ಗದರ್ಶಿ ಬ್ಯಾಂಕ್ ನ ಅಧಿಕಾರಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣ ಅಧಿಕಾರಿ ಅವರ ಅಧ್ಯಕ್ಷತೆಯಲ್ಲಿ ಜಿಲ್ಲಾ ಮಟ್ಟದ ಹಿರಿಯ ಬ್ಯಾಂಕ್ ಅಧಿಕಾರಿಗಳು ಮತ್ತು ಇಲಾಖೆ ಹಿರಿಯ ಅಧಿಕಾರಿಗಳೊಂದಿಗೆ ಪ್ರತಿ ತ್ರೈಮಾಸಿಕ ಸಭೆಗಳಲ್ಲಿ ಚರ್ಚಿಸಿ ಸೂಕ್ತ ನಿರ್ದೇಶನವನ್ನು ಸಮಿತಿಯು ನೀಡುತ್ತಿದೆ. ತಾಲ್ಲೂಕು ಮಟ್ಟದಲ್ಲಿ ತ್ರೈಮಾಸಿಕ ಸಭೆಗಳಲ್ಲಿ ಜಿಲ್ಲಾ ಅಗ್ರಣೀಯ ಬ್ಯಾಂಕಿನ ವ್ಯವಸ್ಥಾಪಕರ ಅಧ್ಯಕ್ಷತೆಯಲ್ಲಿ ತಾಲ್ಲೂಕು ಮಟ್ಟದ ಎಲ್ಲಾ ಬ್ಯಾಂಕರುಗಳ ಜೊತೆ ಸರ್ಕಾರದ ವಿವಿಧ ಯೋಜನೆಗಳ ಅನುಷ್ಠಾನದ ಪ್ರಗತಿಯನ್ನು ಪರಿಶೀಲಿಸಲಾಗುತ್ತದೆ.<br><br>ಆಯಾ ಇಲಾಖೆಗಳು ಅಥವಾ ಸರ್ಕಾರದ ಕಚೇರಿಗಳು ಸಾಲದ ಅರ್ಜಿಗಳನ್ನು ನೇರವಾಗಿ ಬ್ಯಾಂಕುಗಳಿಗೆ ತಲುಪಿಸುತ್ತವೆ. ತಿರಸ್ಕೃತವಾದ ಅರ್ಜಿಗಳನ್ನು ಬ್ಯಾಂಕುಗಳು ನೇರವಾಗಿ ಇಲಾಖೆಗಳು ಅಥವಾ ಸರ್ಕಾರದ ಕಚೇರಿಗಳಿಗೆ ಹಿಂತಿರುಗಿಸುತ್ತವೆ. ಆದ್ದರಿಂದ ಇದರ ಬಗ್ಗೆ ಮಾಹಿತಿ ಇರುವುದಿಲ್ಲ ಎಂದು ರಾಜ್ಯ ಮಟ್ಟದ ಬ್ಯಾಂಕರುಗಳ ಸಮಿತಿಯ ಸಂಚಾಲಕರು ತಿಳಿಸಿರುತ್ತಾರೆ. |

| | | |
|---|---|---|
| ಆ | ಆಯ್ಕೆಯಾದ ಫಲಾನುಭವಿಗಳಿಗೆ ಸಾಲ ಮಂಜೂರು ಮಾಡದೇ ಇರುವುದರಿಂದ ಆಯಾ ಸಾಲಿನಲ್ಲಿ ಸರ್ಕಾರ ನಿಗದಿಪಡಿಸಿರುವ ಗುರಿಯನ್ನು ಮುಟ್ಟಲು ಸಾಧ್ಯವಾಗದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ: ನಿಗದಿತ ಗುರಿ ಮುಟ್ಟಲು ಅನುವಾಗುವಂತೆ ಸರ್ಕಾರ ಕೈಗೊಂಡಿರುವ ಕ್ರಮಗಳೇನು: | ಪ್ರತಿ ವರ್ಷವೂ ಆಯಾ ಇಲಾಖೆಗಳು ತಮ್ಮ ಯೋಜನೆಗಳ ರಾಜ್ಯ ಮಟ್ಟದ ಗುರಿಗಳನ್ನು ರಾಜ್ಯ ಮಟ್ಟದ ಬ್ಯಾಂಕರುಗಳ ಸಮಿತಿಗೆ ಸಲ್ಲಿಸುತ್ತಾರೆ. ನಂತರ ರಾಜ್ಯ ಮಟ್ಟದ ಬ್ಯಾಂಕರುಗಳ ಸಮಿತಿಯು ಜಿಲ್ಲಾವಾರು ಗುರಿಗಳನ್ನು ನಿರ್ಧರಿಸಿ ಆಯಾ ಜಿಲ್ಲಾ ಅಗ್ರಣೀಯ ಬ್ಯಾಂಕಿನ ಅಧಿಕಾರಿಗಳಿಗೆ ತಲುಪಿಸಲಾಗುತ್ತದೆ.<br><br>ಜಿಲ್ಲಾ ಮಟ್ಟದ ಸರ್ಕಾರದ ವಿವಿಧ ಇಲಾಖೆಗಳು ಅರ್ಜಿಗಳನ್ನು ಆಹ್ವಾನಿಸಿ ಫಲಾನುಭವಿಗಳನ್ನು ಆಯ್ಕೆ ಮಾಡಿ ಮಂಜೂರಾತಿಗಾಗಿ ಬ್ಯಾಂಕುಗಳಿಗೆ ಅರ್ಜಿಗಳನ್ನು ಸಲ್ಲಿಸುತ್ತಾರೆ. ಅರ್ಜಿಗಳು ಸೂಕ್ತ ಕಾರಣಗಳಿಂದ ತಿರಸ್ಕೃತಗೊಂಡಲ್ಲಿ ಹೆಚ್ಚುವರಿಯಾಗಿ ಆಯ್ಕೆ ಮಾಡಿದ ಅರ್ಜಿಗಳನ್ನು ಸಂಬಂಧಪಟ್ಟ ಬ್ಯಾಂಕುಗಳಿಗೆ ಕಳುಹಿಸಿ ನಿರ್ಧಿಷ್ಟವಾದ ಗುರಿಯನ್ನು ತಲುಪಲು ಕ್ರಮ ಕೈಗೊಳ್ಳಲಾಗುತ್ತಿದೆ. ರಾಜ್ಯ ಮಟ್ಟದಲ್ಲಿ ಜಿಲ್ಲಾ ಮಟ್ಟದಲ್ಲಿ ಹಾಗೂ ತಾಲ್ಲೂಕು ಮಟ್ಟದಲ್ಲಿ ಇದರ ಪ್ರಗತಿಯನ್ನು ಪ್ರತಿ ತ್ರೈಮಾಸಿಕ ಸಭೆಗಳಲ್ಲಿ ವಿಸ್ತೃತವಾಗಿ ಚರ್ಚಿಸಲಾಗುತ್ತಿದೆ. |
| ಇ | ರಾಷ್ಟ್ರೀಕೃತ ಬ್ಯಾಂಕುಗಳ ಮುಖ್ಯಸ್ಥರಿಗೆ ಆಯಾಯ ಸಾಲುಗಳಲ್ಲಿ ಸರ್ಕಾರ ಘೋಷಣೆ ಮಾಡುವ ಯೋಜನೆಗಳ ಫಲಾನುಭವಿಗಳಿಗೆ ಸಾಲ ಮಂಜೂರು ಮಾಡುವಂತೆ ನಿರ್ದೇಶನ ನೀಡಲು ಸರ್ಕಾರ ಕ್ರಮ ಕೈಗೊಳ್ಳುವುದೇ? | ಪ್ರತಿ ವರ್ಷವೂ ಆಯಾ ಇಲಾಖೆಗಳು ತಮ್ಮ ಯೋಜನೆಗಳ ರಾಜ್ಯ ಮಟ್ಟದ ಗುರಿಗಳನ್ನು ರಾಜ್ಯ ಮಟ್ಟದ ಬ್ಯಾಂಕರುಗಳ ಸಮಿತಿಗೆ ಸಲ್ಲಿಸುತ್ತಾರೆ. ನಂತರ ರಾಜ್ಯ ಮಟ್ಟದ ಬ್ಯಾಂಕರುಗಳ ಸಮಿತಿಯು ಜಿಲ್ಲಾವಾರು ಗುರಿಗಳನ್ನು ನಿರ್ಧರಿಸಿ ಆಯಾ ಜಿಲ್ಲಾ ಅಗ್ರಣೀಯ ಬ್ಯಾಂಕಿನ ಅಧಿಕಾರಿಗಳಿಗೆ ತಲುಪಿಸಲಾಗುತ್ತದೆ.<br><br>ರಾಜ್ಯ ಸರ್ಕಾರದ ಪ್ರಾಯೋಜಿತ ಸಾಲದ ಅರ್ಜಿಗಳನ್ನು ಎಲ್ಲಾ ಬ್ಯಾಂಕುಗಳು ಚಾಲ್ತಿಯಿರುವ ಆರ್ ಬಿ ಐ ನಿಯಮಾವಳಿಗಳ ಪ್ರಕಾರ ಅರ್ಜಿಗಳನ್ನು ಸ್ವೀಕರಿಸಿ ಸೂಕ್ತ ಸಮಯದೊಳಗೆ ನಿರ್ಧಾರವನ್ನು ತೆಗೆದುಕೊಳ್ಳುತ್ತಿದ್ದಾರೆ. ಈ ಬಗ್ಗೆ ರಾಜ್ಯಮಟ್ಟದ ಬ್ಯಾಂಕರುಗಳ ಸಮಿತಿಯು ತ್ರೈಮಾಸಿಕ ಸಭೆಯಲ್ಲಿ ಕೂಲಂಕುಷವಾಗಿ ಚರ್ಚಿಸಿ ಸೂಕ್ತ ಮಾರ್ಗದರ್ಶನವನ್ನು ನೀಡಲಾಗುತ್ತಿದೆ. |

ಸಂಖ್ಯೆ: ಎಫ್‌ಡಿ-ಸಿಎಎಂ/19/2024

**(ಸಿದ್ದರಾಮಯ್ಯ)**
ಮುಖ್ಯಮಂತ್ರಿ